**Akashvani : Bangalore**
**National Bulletin In Kannada**
**11.11.2024 / 13.10 hrs**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**11.11.2024 / 13.10 hrs**

**<><*<><>*><>**

**<u>ಮುಖ್ಯಾಂಶಗಳು</u>**

**೧. ಕೌಶಲ್ಯ ಹೊಂದಿರುವ ಯುವ ಸಮೂಹ ದೇಶದ ಅತಿದೊಡ್ಡ ಶಕ್ತಿ ; ಪ್ರಧಾನಿ ನರೇಂದ್ರ ಮೋದಿ**

**೨. ಹುಬ್ಬಳ್ಳಿ-ಧಾರವಾಡದಲ್ಲಿ ಭಾರತ್ ಬ್ರ್ಯಾಂಡ್ ಉತ್ಪನ್ನಗಳ ಮಾರಾಟಕ್ಕೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಚಾಲನೆ**

**೩. ಮುಂದಿನ ವರ್ಷ ಮೈಸೂರು ಮಾದರಿಯಲ್ಲಿ ಕೇರಳದಲ್ಲಿ ಸಂಗೀತ ಸುಗಂಧ ಕಾರ್ಯಕ್ರಮ ; ಸಚಿವ ಸುರೇಶ್ ಗೋಪಿ.**

**೪. ಬಿಹಾರದ ರಾಜಗಿರ್‌ನಲ್ಲಿ ಇಂದಿನಿಂದ ಮಹಿಳೆಯರ ಏಷ್ಯನ್ ಚಾಂಪಿಯನ್ಸ್ ಟ್ರೋಫಿ ಹಾಕಿ ಪಂದ್ಯಾವಳಿ**

**<><*<><>*><>**

**ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಗುಜರಾತ್ ವಡ್‌ತಲಾದಲ್ಲಿ ಶ್ರೀ ಸ್ವಾಮಿನಾರಾಯಣ ಮಂದಿರದ ೨೦೦ನೇ ವಾರ್ಷಿಕೋತ್ಸವದಲ್ಲಿ ವಿಡಿಯೋ ಕಾನ್ಫರೆನ್ಸ್ ಮೂಲಕ ಪಾಲ್ಗೊಂಡರು. ವಡ್‌ತಲಾದಲ್ಲಿರುವ ಶ್ರೀ ಸ್ವಾಮಿನಾರಾಯಣ ಮಂದಿರವು ಹಲವು ದಶಕಗಳಿಂದ ಜನರ ಸಾಮಾಜಿಕ ಮತ್ತು ಆಧ್ಯಾತ್ಮಿಕ ಜೀವನದ ಮೇಲೆ ಪ್ರಭಾವ ಬೀರುತ್ತಿರುವ ಮಹತ್ವದ ಸಂಸ್ಥೆಯಾಗಿದೆ. ಈ ಸಂದರ್ಭದಲ್ಲಿ ಮಾತನಾಡಿದ ಪ್ರಧಾನಮಂತ್ರಿ ಸ್ವಾವಲಂಬಿ ಭಾರತ ನಿರ್ಮಾಣಕ್ಕೆ ಬಾಹ್ಯ ಬೆಂಬಲದ ಅಗತ್ಯವಿಲ್ಲ. ನಾವೇ ಅಭಿವೃದ್ಧಿ ಹೊಂದಿದ ಭಾರತವನ್ನು ನಿರ್ಮಿಸಬೇಕಿದೆ. ಸ್ಥಳೀಯ ಉತ್ಪನ್ನಗಳಿಗೆ ಆದ್ಯತೆ ನೀಡುವ ಮೂಲಕ ದೇಶವನ್ನು ಪ್ರಗತಿ ಪಥದತ್ತ ಮುನ್ನಡೆಸಬೇಕಿದೆ. ಏಕತೆ, ದೇಶದ ಅಖಂಡತೆಯ ಮೂಲಕ ಅಭಿವೃದ್ಧಿ ಚಟುವಟಿಕೆಗಳನ್ನು ಕೈಗೊಳ್ಳಬೇಕಿದೆ ಎಂದರು. ವಿಭಜಕ ಶಕ್ತಿಗಳನ್ನು ತೊಡೆದು ಹಾಕುವುದು ನಮ್ಮೆಲ್ಲರ ಕರ್ತವ್ಯವಾಗಬೇಕು. ಸ್ವಾಮಿ ನಾರಾಯಣ್ ಅವರ ತತ್ವ ಸಿದ್ಧಾಂತಗಳನ್ನು ನಾವೆಲ್ಲರೂ ಪರಿಪಾಲಿಸಬೇಕು. ಸಶಕ್ತ, ಸಮರ್ಥ, ಸಮೃದ್ಧ ಭಾರತ ನಿರ್ಮಾಣ ಮಾಡಲು ಒಗ್ಗೂಡಬೇಕು. ಕೌಶಲ್ಯ ಹೊಂದಿರುವ ಯುವ ಸಮೂಹ ನಮ್ಮ ಅತಿದೊಡ್ಡ ಶಕ್ತಿಯಾಗಿದೆ. ತಮ್ಮ ಈ ಪ್ರಯತ್ನದಲ್ಲಿ ಅಖಂಡ ಸಾಧು-ಸಂತರ ಸಮೂಹ ಬೆಂಬಲ ನೀಡುತ್ತಿದೆ ಎಂದು ಪ್ರಧಾನಿ ಹೇಳಿದರು.**

**<><*<><>*><>**

ಇಂದು ಸ್ವತಂತ್ರ ಭಾರತದ ಮೊದಲ ಶಿಕ್ಷಣ ಸಚಿವ ಮೌಲಾನ ಅಬ್ದುಲ್ ಕಲಾಂ ಅಝಾದ್ ಅವರ ಜನ್ಮದಿನ. ಈ ಹಿನ್ನಲೆಯಲ್ಲಿ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು, ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್‌ನಲ್ಲಿ ಅಝಾದ್ ಅವರಿಗೆ ನಮನ ಸಲ್ಲಿಸಿದ್ದಾರೆ. ಜ್ಞಾನದ ದಾರಿದೀಪವಾಗಿ, ಸ್ವಾತಂತ್ರ್ಯ ಚಳುವಳಿಯಲ್ಲಿ ಅವರ ಪಾತ್ರವನ್ನು ಸ್ಮರಿಸಲಾಗುತ್ತಿದೆ. ಅವರು ಆಳವಾದ ಚಿಂತಕ, ಸಮೃದ್ಧ ಬರಹಗಾರ, ಅಭಿವೃದ್ಧಿ ಹೊಂದಿದ ಹಾಗೂ ಸಶಕ್ತ ಭಾರತ ನಿರ್ಮಾಣಕ್ಕಾಗಿ ಸರ್ಕಾರಕ್ಕೆ ಸದಾ ಪ್ರೇರಣೆಯಾಗಿದ್ದಾರೆ ಎಂದು ಪ್ರಧಾನಿ ಸ್ಮರಿಸಿದ್ದಾರೆ.

<><*<><>*><>

ಸುಪ್ರೀಂ ಕೋರ್ಟ್‌ನ ೫೧ನೇ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ಇಂದು ಪ್ರಮಾಣವಚನ ಸ್ವೀಕರಿಸಿದರು. ರಾಷ್ಟ್ರಪತಿ ಭವನದಲ್ಲಿ ಬೆಳಗ್ಗೆ ನಡೆದ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಸಂಜೀವ್ ಖನ್ನಾ ಅವರಿಗೆ ಪ್ರಮಾಣವಚನ ಬೋಧಿಸಿದರು. ಈ ಸಂದರ್ಭದಲ್ಲಿ ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಮತ್ತಿತರ ಗಣ್ಯರು ಉಪಸ್ಥಿತರಿದ್ದರು. ೧೯೬೦ರ ಮೇ ೧೪ರಂದು ಜನಿಸಿದ್ದ ನ್ಯಾಯಮೂರ್ತಿ ಸಂಜೀವ್ ಖನ್ನಾ ೧೯೮೩ರಲ್ಲಿ, ದೆಹಲಿ ಬಾರ್ ಕೌನ್ಸಿಲ್ ನಲ್ಲಿ ವಕೀಲರಾಗಿದ್ದರು. ಬಳಿಕ ದೆಹಲಿ ಹೈಕೋರ್ಟ್ ಮತ್ತು ವಿವಿಧ ನ್ಯಾಯಮಂಡಳಿಗಳಲ್ಲಿ ಸೇವೆ ಸಲ್ಲಿಸಿದ ಅವರು, ೨೦೦೫ರಲ್ಲಿ ದೆಹಲಿ ಹೈಕೋರ್ಟ್ ನ ಹೆಚ್ಚುವರಿ ನ್ಯಾಯಾಧೀಶರಾಗಿ ಹಾಗೂ ೨೦೦೬ರಲ್ಲಿ ಖಾಯಂ ನ್ಯಾಯಾಧೀಶರಾಗಿ ಕಾರ್ಯ ನಿರ್ವಹಿಸಿದ್ದರು. ಈ ಮುನ್ನ ಭಾರತದ ಮುಖ್ಯ ನ್ಯಾಯಮೂರ್ತಿಯಾಗಿದ್ದ ಡಿ.ವೈ. ಚಂದ್ರಚೂಢ್ ಅವರು ನಿನ್ನೆಯಷ್ಟೇ ನಿವೃತ್ತರಾದರು. ನೂತನ ಮುಖ್ಯ ನ್ಯಾಯಮೂರ್ತಿಯವರ ಅಧಿಕಾರಾವಧಿ ೨೦೨೫ರ ಮೇ ೧೩ರ ವರೆಗೆ ಇರಲಿದೆ.

<><*<><>*><>

ಅಗತ್ಯ ವಸ್ತುಗಳ ಬೆಲೆ ಏರಿಕೆಗೆ ಪರಿಹಾರವಾಗಿ ಹುಬ್ಬಳ್ಳಿ ಧಾರವಾಡ ಅವಳಿ ನಗರದಲ್ಲಿ ಭಾರತ್ ಬ್ರ್ಯಾಂಡ್ ಉತ್ಪನ್ನಗಳ ಮಾರಾಟಕ್ಕೆ ಕೇಂದ್ರ ಗ್ರಾಹಕ ವ್ಯವಹಾರ ಮತ್ತು ನಾಗರಿಕ ಪೂರೈಕೆ ಮತ್ತು ಸಾರ್ವಜನಿಕ ವಿತರಣಾ ಸಚಿವ ಪ್ರಲ್ಹಾದ್ ಜೋಶಿ ಇಂದು ಚಾಲನೆ ನೀಡಿದರು. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಸಾರ್ವಜನಿಕರಿಗೆ ಭಾರತ್ ಬ್ರ್ಯಾಂಡ್ ಉತ್ಪನ್ನಗಳನ್ನು ಅಗ್ಗದ ಬೆಲೆಯಲ್ಲಿ ಮಾರಾಟ ಮಾಡುವ ವಾಹನಗಳಿಗೆ ಹಸಿರು ನಿಶಾನೆ ತೋರಿದರು. ಹುಬ್ಬಳ್ಳಿಯ ಮೂರು ಸಾವಿರ ಮಠದ ಮೈದಾನದಲ್ಲಿ ನಡೆದ ಕಾರ್ಯಕ್ರಮದಲ್ಲಿ ೫೦ಕ್ಕೂ ಹೆಚ್ಚು ವಾಹನಗಳಿಗೆ ಚಾಲನೆ ನೀಡಲಾಗಿದ್ದು, ನೆರೆದಿದ್ದ ಮಹಿಳೆಯರಿಗೆ ಉತ್ಪನ್ನಗಳನ್ನು ಅಗ್ಗದ ಬೆಲೆಯಲ್ಲಿ ವಿತರಿಸಲಾಯಿತು. ಭಾರತ್ ಬ್ರ್ಯಾಂಡ್‌ನ ಅಕ್ಕಿ, ಗೋದಿ ಹಿಟ್ಟು, ಬೇಳೆಗಳು ಮುಂತಾದ ಅಗತ್ಯ ವಸ್ತುಗಳನ್ನು ಅತೀ ಕಡಿಮೆ ದರದಲ್ಲಿ ಸಾರ್ವಜನಿಕರಿಗೆ ಲಭ್ಯವಿದ್ದು ಈ ಯೋಜನೆಯ ಸೌಲಭ್ಯಗಳನ್ನು ಸಾರ್ವಜನಿಕರು ಸದುಪಯೋಗಪಡೆದುಕೊಳ್ಳಬೇಕೆಂದು ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ.

<><*<><>*><>

ಭಗವಾನ್ ಬಿರ್ಸಾ ಮುಂಡಾ ಜನ್ಮದಿನಾಚರಣೆ ಅಂಗವಾಗಿ ಬುಡಕಟ್ಟುಗಳ ಗೌರವ ದಿನ ಹಿನ್ನಲೆಯಲ್ಲಿ, ಕೇಂದ್ರ ಯುವಜನ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಡಾ ಮನ್ಸುಖ್ ಮಾಂಡವಿಯಾ ಅವರು ಛತ್ತೀಸ್‌ಗಢದ ಜಶ್‌ಪುರದಲ್ಲಿ ಮೇರಾ ಭಾರತ್ ಯುವ ಸ್ವಯಂಸೇವಕರೊಂದಿಗೆ ಇದೇ ೧೫ರಂದು ಬುಧವಾರ ಪಾದಯಾತ್ರೆ ಕೈಗೊಳ್ಳಲಿದ್ದಾರೆ. ಛತ್ತೀಸ್‌ಗಢ ಮುಖ್ಯಮಂತ್ರಿ ವಿಷ್ಣು ದೇವ್ ಸಾಯಿ,

ಇತರ ರಾಜ್ಯ ಸಚಿವರು  ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಈ ಆಚರಣೆ, ಬುಡಕಟ್ಟುಗಳ ಪರಂಪರೆಯನ್ನು ಗೌರವಿಸುವ ಮತ್ತು ರಾಷ್ಟ್ರದ ಅಭಿವೃದ್ಧಿಗೆ ಬುಡಕಟ್ಟು ಸಮುದಾಯಗಳ ಕೊಡುಗೆಗಳನ್ನು ಸ್ಮರಿಸುವ ನಿಟ್ಟಿನಲ್ಲಿ ಮಹತ್ವ ಪಡೆದಿದೆ. ದೇಶದಾದ್ಯಂತ ಬುಡಕಟ್ಟು ಸಮುದಾಯಗಳಿಗೆ ಪ್ರಯೋಜನವಾಗುವ ಸರ್ಕಾರಿ ಯೋಜನೆಗಳ ಬಗ್ಗೆ ಜಾಗೃತಿ ಮೂಡಿಸಲು ಈ ಪಾದಯಾತ್ರೆ ನಡೆಸಲಾಗುತ್ತಿದೆ.

<><*<><>*><>

ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಕಳೆದ ಮೂರು ದಿನಗಳಿಂದ ನಡೆದ ಸಂಗೀತ ಸುಗಂಧ ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಕೇಂದ್ರ ಪ್ರವಾಸೋದ್ಯಮ ಖಾತೆ ರಾಜ್ಯ ಸಚಿವ ಸುರೇಶ್ ಗೋಪಿ ಪಾಲ್ಗೊಂಡಿದ್ದರು. ಬಳಿಕ ಮಾತನಾಡಿದ ಅವರು,  ದೇಶದಲ್ಲೇ ಸ್ವಚ್ಛತೆ ಮತ್ತು ಸಂಸ್ಕೃತಿಯಲ್ಲಿ ಪ್ರಮುಖವಾಗಿ ಎದ್ದು ಕಾಣುವ ನಗರ ಮೈಸೂರು. ನಾಲ್ವಡಿ ಕೃಷ್ಣರಾಜ ಒಡೆಯರ್ ಸಂಗೀತಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡಿದ್ದರು. ಮೂರು ದಿನಗಳ ಕಾಲ ನಡೆದ ಸಂಗೀತ ಸುಗಂಧ ಯಶಸ್ವಿಯಾಗಿದ್ದು, ಮುಂದಿನ ವರ್ಷ ಇದೇ ಮಾದರಿಯಲ್ಲಿ ಕೇರಳದಲ್ಲಿ ಸಂಗೀತ ಕಾರ್ಯಕ್ರಮ ಆಯೋಜಿಸಲಾಗುವುದು ಎಂದರು. ದಕ್ಷಿಣ ರಾಜ್ಯಗಳಾದ ಕರ್ನಾಟಕ,  ಆಂಧ್ರ ಪ್ರದೇಶ, ತಮಿಳುನಾಡು ಮತ್ತು ಕೇರಳ ರಾಜ್ಯದಿಂದ ಪ್ರಮುಖ ಸಂಗೀತಗಾರರು ಸಂಗೀತ ಸುಗಂಧ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ಕಳೆ ತಂದಿದ್ದಾರೆ ಎಂದು ತಿಳಿಸಿದರು.

<><*<><>*><>

ಜ್ಞಾನಪೀಠ ಪುರಸ್ಕೃತ ಡಾ.ಶಿವರಾಮ ಕಾರಂತ ಟ್ರಸ್ಟ್, ಶಿವರಾಮ ಕಾರಂತ ಹುಟ್ಟೂರ ಪ್ರಶಸ್ತಿ ಪ್ರತಿಷ್ಠಾನದಿಂದ ಕೋಟತೊಟ್ಟು ಗ್ರಾಮ ಪಂಚಾಯತ್ ನಲ್ಲಿ ನಿನ್ನೆ ನಡೆದ 'ಕಾರಂತ ಹುಟ್ಟೂರ' ಪ್ರಶಸ್ತಿ ಪ್ರದಾನ ಸಮಾರಂಭವನ್ನು ಮೇಘಾಲಯ ರಾಜ್ಯಪಾಲ ಸಿ.ಎಚ್.ವಿಜಯಶಂಕರ್ ಉದ್ಘಾಟಿಸಿದರು. ಸಂಸದ ಕೋಟಾ ಶ್ರೀನಿವಾಸ ಪೂಜಾರಿ, ಶಾಸಕರಾದ ಕಿರಣ್ ಕುಮಾರ್ ಕೊಡ್ಗಿ, ಗುರ್ಮೆ ಸುರೇಶ್ ಶೆಟ್ಟಿ, ಪ್ರತಿಷ್ಠಾನದ ಅಧ್ಯಕ್ಷ ಆನಂದ ಸಿ.ಕುಂದರ್ ಮತ್ತಿತರರು ಉಪಸ್ಥಿತರಿದ್ದರು. ಸಾಹಿತಿ ಪ್ರೊ.ಎಂ.ಕೃಷ್ಣೇಗೌಡ ಅವರಿಗೆ ಶಿವರಾಮ ಕಾರಂತ ಹುಟ್ಟೂರ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು. ಬಳಿಕ ಅವಿಭಜಿತ ದಕ್ಷಿಣ ಕನ್ನಡ ಜಿಲ್ಲೆಯ ವಿವಿಧ ಸಾಧನೆ ಮಾಡಿದ ಗ್ರಾಮ ಪಂಚಾಯಿತಿಗಳಿಗೆ ಕಾರಂತ ಪುರಸ್ಕಾರ ನೀಡಿ ಗೌರವಿಸಲಾಯಿತು. ಇದಕ್ಕೂ ಮುನ್ನ ಶಿವರಾಮ ಕಾರಂತರ ಪ್ರತಿಮೆಗೆ ಗಣ್ಯರು ಮಾಲಾರ್ಪಣೆ ಮಾಡಿದರು. ಬಳಿಕ ಸಿ.ಎಚ್. ವಿಜಯಶಂಕರ್, ಕಾರಂತರ ಆತ್ಮಾವಲೋಕನ ಕಾರ್ಯಕ್ರಮ ಇದಾಗಿದ್ದು, ಲೌಕಿಕ,  ಅಲೌಕಿಕ ಸಾಧನೆಗೆ ಜ್ಞಾನವೊಂದೇ ಮಾರ್ಗ ಎಂಬುದನ್ನು ಕಾರಂತರು ತೋರಿಸಿಕೊಟ್ಟಿದ್ದರು ಎಂದು ಕಾರಂತರ ಸಾಧನೆಯನ್ನು ಸ್ಮರಿಸಿದರು. ಪ್ರೊ.ಎಂ.ಕೃಷ್ಣೇಗೌಡ,  ಶಿವರಾಮ ಕಾರಂತರ ಸಾಹಸ, ದಿಟ್ಟತನ, ಜ್ಞಾನ, ನೇರನುಡಿ ಬಗ್ಗೆ ತಿಳಿಯಬೇಕೆಂದಲ್ಲಿ ಅವರ ಕಥೆ ಕಾದಂಬರಿಗಳನ್ನು ಅಧ್ಯಯನ ಮಾಡಬೇಕು. ಯುವಜನತೆ ಅವುಗಳನ್ನು ಅಳವಡಿಸಿಕೊಳ್ಳಬೇಕು ಎಂದರು.

<><*<><>*><>

ಬಿಹಾರದ ರಾಜಗಿರ್ ನಲ್ಲಿ ಇಂದಿನಿಂದ ಮಹಿಳೆಯರ ಏಷ್ಯನ್ ಚಾಂಪಿಯನ್ಸ್ ಟ್ರೋಫಿ ಹಾಕಿ ಟೂರ್ನಿ ಆರಂಭವಾಗಲಿದೆ. ಒಟ್ಟು ೧೦ ದಿನಗಳ ಕಾಲ ಟೂರ್ನಿ ನಡೆಯಲಿದೆ. ಇಂದು ಸಂಜೆ ೪.೪೫ಕ್ಕೆ

ಆರಂಭವಾಗಲಿರುವ ತನ್ನ ಮೊದಲ ಪಂದ್ಯದಲ್ಲಿ, ಹಾಲಿ ಚಾಂಪಿಯನ್ ಭಾರತ ತಂಡದ ವನಿತೆಯರು, ಮಲೇಷಿಯಾ ವಿರುದ್ಧ ಸೆಣಸಲಿದ್ದಾರೆ. ೨೦೧೮ರಲ್ಲಿ ಸಿಂಗಾಪುರ ಮತ್ತು ೨೦೨೩ರಲ್ಲಿ ರಾಂಚಿಯಲ್ಲಿ ನಡೆದಿದ್ದ ಟೂರ್ನಿಗಳಲ್ಲಿ ಪ್ರಶಸ್ತಿ ಗೆದ್ದಿರುವ ಭಾರತ ತಂಡಕ್ಕೆ, ಈಗ ಸ್ವದೇಶದಲ್ಲೇ ಚಾಂಪಿಯನ್ ಪಟ್ಟ ಉಳಿಸಿಕೊಳ್ಳುವ ತವಕವಿದೆ. ಇಂದೇ ನಡೆಯಲಿರುವ ಇನ್ನಿತರ ಪಂದ್ಯಗಳಲ್ಲಿ ಜಪಾನ್ ಮತ್ತು ದಕ್ಷಿಣ ಕೊರಿಯಾ ಹಾಗೂ ಚೈನಾ ಮತ್ತು ಥೈಲೆಂಡ್ ತಂಡಗಳು ಮುಖಾಮುಖಿಯಾಗಲಿವೆ.

<><*<><>*><>

ಮೈಸೂರಿನ ಚಾಮುಂಡಿ ವಿಹಾರ ಒಳಾಂಗಣ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಮೂರು ದಿನಗಳ ೩೮ನೇ ಅಖಿಲ ಭಾರತ ಅಂಚೆ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ, ವಿವಿಧ ರಾಜ್ಯಗಳ ೨೦ ಪುರುಷರ ಮತ್ತು ೧೭ ಮಹಿಳಾ ತಂಡಗಳು ಭಾಗವಹಿಸಿವೆ. ಮೊದಲ ದಿನವಾದ ನಿನ್ನೆ ಪ್ರೀ ಕ್ವಾರ್ಟರ್ ಫೈನಲ್ಸ್ ಪಂದ್ಯಾವಳಿಗಳು ನಡೆದಿದ್ದು, ಪುರುಷರ ವಿಭಾಗದಲ್ಲಿ ೧೦ ಪಂದ್ಯಗಳು ಮತ್ತು ಮಹಿಳೆಯರ ವಿಭಾಗದಲ್ಲಿ ೯ ಪಂದ್ಯಗಳು ನಡೆದವು. ಪುರುಷರ ವಿಭಾಗದ ಟೀಮ್ ಚಾಂಪಿಯನ್ ಶಿಪ್‌ನಲ್ಲಿ, ಜಾರ್ಖಂಡ್ ತಂಡವು ಜಮ್ಮು ಕಾಶ್ಮೀರ ತಂಡವನ್ನು ೩-೦, ಹರಿಯಾಣ ತಂಡ ಪಶ್ಚಿಮಬಂಗಾಳದ ವಿರುದ್ಧ  ೩-೧, ಕೇರಳ ತಂಡ ರಾಜಸ್ಥಾನ ವಿರುದ್ಧ ೩-೧, ಮಹಾರಾಷ್ಟ್ರ ತಂಡ ಉತ್ತರಾಖಂಡ ವಿರುದ್ಧ ೩-೦, ಒಡಿಸ್ಸಾ ತಂಡ ಅಸ್ಸಾಂ ವಿರುದ್ಧ ೩-೨, ಜಾರ್ಖಂಡ್ ತಂಡ ಕರ್ನಾಟಕ ವಿರುದ್ಧ ೩-೧, ಅಂತರದಿಂದ ಪರಾಭಾವಗೊಂಡಿತು.  ಮಹಿಳೆಯರ ವಿಭಾಗದ ಟೀಮ್ ಚಾಂಪಿಯನ್ ಶಿಪ್‌ನಲ್ಲಿ, ಗುಜರಾತ್ ತಂಡ ಕರ್ನಾಟಕವನ್ನು ೨-೧ ಅಂತರದಿಂದ ಪರಾಭವಗೊಳಿಸಿತು. ಇಂದು ಕ್ವಾರ್ಟರ್ ಫೈನಲ್ಸ್ ಪಂದ್ಯಗಳು ನಡೆಯಲಿವೆ.

<><*<><>*><>

ಆಂಧ್ರಪ್ರದೇಶದ ಅಮರಾವತಿಯಲ್ಲಿ ನಡೆಯುತ್ತಿರುವ ವಿಧಾನಸಭಾ ಅಧಿವೇಶನದಲ್ಲಿ ೨೦೨೪-೨೫ ರ ಹಣಕಾಸು ವರ್ಷದ ಪೂರ್ಣ ಬಜೆಟ್ ಅನ್ನು ಎನ್‌ಡಿಎ ಮೈತ್ರಿಕೂಟ ಇಂದು ಮಂಡಿಸಲಿದೆ. ಜೂನ್‌ನಲ್ಲಿ ಅಧಿಕಾರ ವಹಿಸಿಕೊಂಡ ಎನ್‌ಡಿಎ ಮೈತ್ರಿಕೂಟ ಸರ್ಕಾರವನ್ನು ಮೊದಲ ಪೂರ್ಣ ಪ್ರಮಾಣದ ಬಜೆಟ್ ಮಂಡಿಸುತ್ತಿದೆ, ಹಣಕಾಸು ಸಚಿವ ಪಯ್ಯಾವುಲ ಕೇಶವ್ ಅವರು ಸುಮಾರು ೨ ಲಕ್ಷದ ೯೦ ಸಾವಿರ ಕೋಟಿ ರೂಪಾಯಿ ಮೊತ್ತದ ಸಂಪೂರ್ಣ ಬಜೆಟ್ ಮಂಡಿಸಲಿದ್ದಾರೆ. ಬಜೆಟ್‌ನಲ್ಲಿ ಕಲ್ಯಾಣ ಕಾರ್ಯಕ್ರಮಗಳಿಗೆ ಆದ್ಯತೆ ಜೊತೆಗೆ ಚುನಾವಣಾ ಪ್ರಣಾಳಿಕೆಯ ಆರು ಗ್ಯಾರೆಂಟಿ ಸೇರಿದಂತೆ ಪ್ರಮುಖ ಭರವಸೆಗಳನ್ನು ಘೋಷಿಸುವ ಸಾಧ್ಯತೆಯಿದೆ. ರಾಜಧಾನಿ ಮತ್ತು ಇತರೆಡೆ ಮೂಲಸೌಕರ್ಯ ಯೋಜನೆಗಳ ಜೊತೆಗೆ, ಹೊಸ ಭೂ ಕಬಳಿಕೆ ನಿಷೇಧ ಮಸೂದೆ ೨೦೨೪ ಅನ್ನು ಸಹ ಮಂಡಿಸುವ ಸಾಧ್ಯತೆಯಿದೆ.

<><*<><>*><>

ಅಂತಾರಾಷ್ಟ್ರೀಯ ಹಣಕಾಸು ನಿಧಿ ಐಎಮ್‌ಎಫ್ ನ ನಿಯೋಗವೊಂದು ಶ್ರೀಲಂಕಾಕ್ಕೆ ಭೇಟಿ ನೀಡಲಿದ್ದು, ದ್ವೀಪ ರಾಷ್ಟ್ರದ ಆರ್ಥಿಕ ಕಾರ್ಯಕ್ರಮಗಳನ್ನು ಪರಾಮರ್ಶಿಸಲಿದೆ. ಐಎಮ್‌ಎಫ್ ಉನ್ನತ ಅಧಿಕಾರಿ ಪೀಟರ್ ಬ್ರಿಯೊರ್ ನೇತೃತ್ವದ ನಿಯೋಗ, ಶ್ರೀಲಂಕಾದ ಆರ್ಥಿಕ ನೀತಿ ಹಾಲಿ ಯೋಜನೆಗಳ ಸ್ಥಿತಿಗತಿ ಮತ್ತು ಈ ಹಿಂದಿನ ಒಪ್ಪಂದಗಳ ಅನುಷ್ಠಾನದ ಬಗ್ಗೆ ಪರಾಮರ್ಶಿಸಲಿದೆ. ನಿಯೋಗದ ವರದಿಯ ಆಧಾರದಲ್ಲಿ ಐಎಮ್‌ಎಫ್, ಶ್ರೀಲಂಕಾಕ್ಕೆ ಮುಂದಿನ ಕಂತನ್ನು ಬಿಡುಗಡೆಗೊಳಿಸಲಿದೆ. ಆರ್ಥಿಕ ಸಂಕಷ್ಟದಲ್ಲಿದ್ದ ಶ್ರೀಲಂಕಾಕ್ಕೆ ೪೮ ತಿಂಗಳ ಅವಧಿಯ ೨.೯ ಬಿಲಿಯನ್

ಡಾಲರ್ ಹೆಚ್ಚುವರಿ ಹಣಕಾಸು ಸೌಲಭ್ಯವನ್ನು ಐಎಮ್‌ಎಫ್ ಕಲ್ಪಿಸಿತ್ತು. ಆರ್ಥಿಕ ಬಿಕ್ಕಟ್ಟಿನಿಂದಾಗಿ ಶ್ರೀಲಂಕಾದಲ್ಲಿ ದಿನಬಳಕೆ ವಸ್ತುಗಳ ಬೆಲೆ ಗಗನಕ್ಕೇರಿತ್ತು.

<><*<><>*><>

ತಮಿಳುನಾಡು, ಕಾರೈಕಲ್, ಪುದುಚೇರಿಯಲ್ಲಿ ಮುಂದಿನ ಎರಡು ದಿನಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕರಾವಳಿ ಆಂದ್ರಪ್ರದೇಶ, ಯಾನಂ, ರಾಯಲ್ ಸೀಮಾದಲ್ಲಿ ನಾಳೆ ಭಾರಿ ಮಳೆಯಾಗುವ ನಿರೀಕ್ಷೆಯಿದ್ದು, ಮುಂದಿನ ೨ ದಿನಗಳಲ್ಲಿ ಪಶ್ಚಿಮ ಪಂಜಾಬ್ ಮತ್ತು ವಾಯುವ್ಯ ರಾಜಸ್ಥಾನದಲ್ಲಿ ದಟ್ಟ ಮಂಜು ಕವಿಯುವ ಸಾಧ್ಯತೆ ಇದೆ. ದೆಹಲಿ ಮತ್ತು ಎನ್‌ಸಿಆರ್ ಪ್ರದೇಶದಲ್ಲೂ ರಾತ್ರಿ ಮತ್ತು ಮುಂಜಾನೆ ಸಮಯದಲ್ಲಿ ಹೊಗೆ ಮತ್ತು ಮಂಜಿನ ಅನುಭವ ಇರಲಿದೆ ಎಂದು ಇಲಾಖೆ ತಿಳಿಸಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ೨.೩೦ ಕ್ಕೆ <>*><>